ಪರಿಶಿಷ್ಟ ಜಾತಿಗೆ ಸುಮಾರು 19,500.00 ಎಕರೆ ಜಮೀನು ಹಾಗೂ ಪರಿಶಿಷ್ಟ ಪಂಗಡದವರಿಗೆ 6211.20 ಎಕರೆ ವಿಸ್ತೀರ್ಣದ ಜಮೀನು ನೀರಾವರಿ ಒಳಪಡುತ್ತದೆ.

147 ಶ್ರೀ ನರಸಿಂಹ ನಾಯಕ (ರಾಜು ಗೌಡ) (ಸುರಪುರ)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

ಅ) ಗುಲ್ಬರ್ಗಾ ಜಿಲ್ಲೆಯಲ್ಲಿರುವ ಒಟ್ಟು ಸರ್ಕಾರಿ ಆಸ್ಪತ್ರೆಗಳೆಷ್ಟು;

ಗುಲ್ಬರ್ಗಾ ಜಿಲ್ಲೆಯಲ್ಲಿ ಕೆಳಕಂಡಂತೆ 159 ಆಸ್ಪತ್ರೆಗಳು ಇವೆ.

1 ಜಿಲ್ಲಾ ಮಟ್ಟದ ಆಸ್ಪತ್ರೆ
9 ತಾಲ್ಲೂಕು ಆಸ್ಪತ್ರೆ
22 ಸಮುದಾಯ ಆರೋಗ್ಯ ಕೇಂದ್ರ
126 ಪ್ರಾಥಮಿಕ ಆರೋಗ್ಯ ಕೇಂದ್ರ
1 ನಗರ ಪ್ರಾಥಮಿಕ ಆರೋಗ್ಯ ಕೇಂದ್ರ

ಆ) ಎಷ್ಟು ಜನ ವೈದ್ಯಾಧಿಕಾರಿಗಳು ಸೇವೆ ಸಲ್ಲಿಸುತ್ತಿದ್ದಾರೆ;

ಮಂಜೂರಾಗಿರುವ 390 ಹುದ್ದೆಗಳಲ್ಲಿ ಒಟ್ಟು 311 ಜನ ವೈದ್ಯಾಧಿಕಾರಿಗಳು ಸೇವೆ ಸಲ್ಲಿಸುತ್ತಿದ್ದಾರೆ.

ಇ) ಹಾಲಿ ಖಾಲಿ ಇರುವ ಹುದ್ದೆಗಳೆಷ್ಟು?

ಹಾಲಿ ಒಟ್ಟು 79 ಹುದ್ದೆಗಳು ಖಾಲಿ ಇರುತ್ತದೆ.

120 ಶ್ರೀ ಹೆಚ್.ಡಿ. ರೇವಣ್ಣ (ಹೊಳೆನರಸೀಪುರ)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

ಅ) ಹಾಸನ ಜಿಲ್ಲೆಯಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಮತ್ತು ತಾಲ್ಲೂಕು ಆಸ್ಪತ್ರೆಗಳು ಎಷ್ಟು? ತಾಲ್ಲೂಕುವಾರು ಮಾಹಿತಿ ನೀಡುವುದು

ಮಾಹಿತಿಯನ್ನು ಅನುಬಂಧ– 1ರಲ್ಲಿ ನೀಡಲಾಗಿದೆ.

ಆ) ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆಸ್ಪತ್ರೆಗಳಿಗೆ ಸುಸಜ್ಜಿತವಾದ ಕಟ್ಟಡಗಳು ಇವೆಯೇ; ಹಾಗಿಲ್ಲದಿದ್ದಲ್ಲಿ ಕಟ್ಟಡಗಳನ್ನು ಒದಗಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಹಾಗೂ ಸಮುದಾಯ ಆರೋಗ್ಯ ಕೇಂದ್ರಗಳಿಗೆ ಕಟ್ಟಡಗಳು ಲಭ್ಯ ಇವೆ. ಆದರೆ ಹೊಸದಾಗಿ ಮಂಜೂರಾದ 26 ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಹಾಗೂ ನುಗ್ಗೇಹಳ್ಳಿ, ದೊಡ್ಡಕುಂಚೆ ಮತ್ತು ಅರೆಹಳ್ಳಿ ಸಮುದಾಯ ಕೇಂದ್ರಗಳಿಗೆ ಕಟ್ಟಡಗಳು ಲಭ್ಯವಿರುವುದಿಲ್ಲ. ಹಣದ ಲಭ್ಯತೆ

ಆಧಾರದ ಮೇಲೆ ಹಂತ ಹಂತವಾಗಿ ಕಟ್ಟಡಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು.

ಇ) ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಸಮುದಾಯ ಆಸ್ಪತ್ರೆಗಳಿಗೆ ಮಂಜೂರಾಗಿರುವ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ; ಹಾಗಿಲ್ಲದಿದ್ದಲ್ಲಿ ಮಾಹಿತಿ ನೀಡುವುದು.

ಹಾಸನ ಜಿಲ್ಲೆಯ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಿಗೆ ವಿವಿಧ ವೃಂದದ ಒಟ್ಟು 2711 ಹುದ್ದೆಗಳು ಮಂಜೂರಾಗಿದ್ದು, 1698 ಹುದ್ದೆಗಳು ಭರ್ತಿಯಾಗಿವೆ ಹಾಗೂ 1013 ಹುದ್ದೆಗಳು ಖಾಲಿ ಇವೆ.

ತಜ್ಞ ವೈದ್ಯರುಗಳನ್ನು ಸಮಾಲೋಚನೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಜಿಲ್ಲಾಧಿಕಾರಿಗಳಿಗೆ ಅನುಮತಿ ನೀಡಲಾಗಿದೆ. ರೂ. 25,000 ರಿಂದ ರೂ. 50,000 ಗರಿಷ್ಠ ಮೊತ್ತದ ಮಾಸಿಕ ಗೌರವಧನವನ್ನು ಎನ್.ಆರ್.ಹೆಚ್.ಎಂ. ವತಿಯಿಂದ ನೀಡಲು ಅವಕಾಶ ಕಲ್ಪಿಸಲಾಗಿದೆ. ರಾಜ್ಯಾದ್ಯಂತ ಖಾಲಿ ಇರುವ 182 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಪ್ರಸ್ತುತ 5,245 ವೈದ್ಯೇತರ ಸಿಬ್ಬಂದಿ ನೇಮಕಾತಿ ಮಾಡುವ ಪ್ರಕ್ರಿಯೆ ಜಾರಿಯಲ್ಲಿದೆ. ಅದು ಪೂರ್ಣಗೊಂಡ ನಂತರ ಹುದ್ದೆಗಳನ್ನು ಭರ್ತಿಮಾಡಲು ಕ್ರಮವಹಿಸಲಾಗುವುದು.

ಚುಕ್ಕೆ ಗುರುತಿಲ್ಲದ ಪ್ರಶ್ನೆ 120ಕ್ಕೆ ಅನುಬಂಧ

ಹಾಸನ ಜಿಲ್ಲೆಯಲ್ಲಿ ಇರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಸಮುದಾಯ ಆರೋಗ್ಯ ಕೇಂದ್ರಗಳ ತಾಲ್ಲೂಕುವಾರು ಮಾಹಿತಿ

ಕ್ರಮ ಸಂಖ್ಯೆ	ತಾಲ್ಲೂಕು	ಸಾರ್ವಜನಿಕ ಆಸ್ಪತ್ರೆ	ಸಮುದಾಯ ಆರೋಗ್ಯ ಕೇಂದ್ರ	ಪ್ರಾಥಮಿಕ ಆರೋಗ್ಯ ಕೇಂದ್ರ	ಹೊಸದಾಗಿ ಮಂಜೂರಾದ ಪ್ರಾಥಮಿಕ ಆರೋಗ್ಯ ಕೇಂದ್ರ
1	ಆಲೂರು	1	–	5	2
2	ಅರಕಲಗೂಡು	1	1	14	2
3	ಅರಸೀಕೆರೆ	1	2	21	2
4	ಬೇಲೂರು	1	2	9	3
5	ಚನ್ನರಾಯಪಟ್ಟಣ	1	4	22	4
6	ಹಾಸನ	–	3	19	4
7	ಹೊಳೆನರಸೀಪುರ	1	3	16	6
8	ಸಕಲೇಶಪುರ	1	–	15	3
	ಒಟ್ಟು	7	15	121	26